ಕಳ್ಳತನ ಮಾಡುವವರಲ್ಲಿ ಅತಿಕೆಟ್ಟವರು ನಮಾಝ್ನಲ್ಲಿ ಕಳ್ಳತನ ಮಾಡುವವರು." ಸಹಾಬಿಗಳು ಕೇಳಿದರು: "ನಮಾಝ್ನಲ್ಲಿ ಕಳ್ಳತನ ಮಾಡುವುದು ಹೇಗೆ?" ಅವರು ಉತ್ತರಿಸಿದರು: "ಅದರ ರುಕೂ ಮತ್ತು ಸುಜೂದ್ಗಳನ್ನು ಪೂರ್ಣಗೊಳಿಸದಿರುವುದು

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಕಳ್ಳತನ ಮಾಡುವವರಲ್ಲಿ ಅತಿಕೆಟ್ಟವರು ನಮಾಝ್ನಲ್ಲಿ ಕಳ್ಳತನ ಮಾಡುವವರು." ಸಹಾಬಿಗಳು ಕೇಳಿದರು: "ನಮಾಝ್ನಲ್ಲಿ ಕಳ್ಳತನ ಮಾಡುವುದು ಹೇಗೆ?" ಅವರು ಉತ್ತರಿಸಿದರು: "ಅದರ ರುಕೂ ಮತ್ತು ಸುಜೂದ್ಗಳನ್ನು ಪೂರ್ಣಗೊಳಿಸದಿರುವುದು." [صحيح] [رواه ابن حبان]

ಕಳ್ಳತನ ಮಾಡುವವರಲ್ಲಿ ಅತಿಕೆಟ್ಟ ವ್ಯಕ್ತಿ ನಮಾಝ್ನಲ್ಲಿ ಕಳ್ಳತನ ಮಾಡುವವನೆಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸಿದ್ದಾರೆ. ಅದೇಕೆಂದರೆ, ಇತರರ ಹಣವನ್ನು ಕದ್ದವನು ಇಹಲೋಕದಲ್ಲಿ ಅದರ ಪ್ರಯೋಜನ ಪಡೆಯುತ್ತಾನೆ. ಆದರೆ ಈ ಕಳ್ಳ ಸ್ವತಃ ತನ್ನದೇ ಪ್ರತಿಫಲವನ್ನು ಕದಿಯುತ್ತಿದ್ದಾನೆ. ಸಹಾಬಿಗಳು ಕೇಳಿದರು: "ಓ ಅಲ್ಲಾಹನ ಸಂದೇಶವಾಹಕರೇ! ನಮಾಝ್ನಿಂದ ಕದಿಯುವುದು ಹೇಗೆ?" ಅವರು ಉತ್ತರಿಸಿದರು: "ಅದರ ರುಕೂ ಮತ್ತು ಸುಜೂದ್ಗಳನ್ನು ಪೂರ್ಣಗೊಳಿಸದಿರುವುದು." ಅಂದರೆ ರುಕೂ ಮತ್ತು ಸುಜೂದ್ಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸದೆ ಆತುರದಿಂದ ನಿರ್ವಹಿಸುವುದು.

http://sunnah.global/hadeeth/kn/show/65100